(4th Round) ಕರ್ನಾಟಕ ವಿಧಾನ ಪರಿಷತ್ತು

20/9/2021

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 848(807)
ಸದಸ್ಯರ ಹೆಸರು : ಶ್ರೀ.ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 20.09.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಯಾವ ಸಾಲಿನವರೆಗಿನ ಖಾಸಗಿ ಕನ್ನಡ ಮಾಧ್ಯಮ ಶಾಲಾ – ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ;	ಸರ್ಕಾರದ ಆದೇಶ ಸಂಖ್ಯೆ ಇಡಿ 59 ಪಿ ಎಂ ಸಿ 2006, ದಿನಾಂಕ: 06.10.2007 ರನ್ವಯ ದಿನಾಂಕ : 01.06.1987 ರಿಂದ 1992–93ನೇ ಶೈಕ್ಷಣಿಕ ಸಾಲಿನವರಿಗೆ ಹಾಗೂ ಇಡಿ 217 ಪಿ ಎಂ ಸಿ 2008, ದಿನಾಂಕ : 08.09.2008, ರನ್ವಯ 1993–94 ಮತ್ತು 1994–95ನೇ ಶೈಕ್ಷಣಿಕ ಸಾಲಿನವರಿಗೆ ಪ್ರಾರಂಭಿಸಿ ಸತತವಾಗಿ ನಡೆಯುತ್ತಿರುವ ಕನ್ನಡ ಮಾಧ್ಯಮ ಶಾಲೆಗಳನ್ನು ವೇತನದಾನುಕ್ಕೊಳಪಡಿಸಲಾಗಿದೆ.
ಆ.	1995 ರ ನಂತರ ಶಾಲಾ – ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	1995 ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ ಸೂಚಿಸಿರುವಂತೆ ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 5 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು /ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ.
ಇ.	ಇದ್ದಲ್ಲಿ, ಯಾವ ಸಾಲಿನವರೆಗಿನ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು; ಮತ್ತು ಯಾವಾಗ (ಮಾಹಿತಿ ಒದಗಿಸುವುದು)	

ಇಪಿ 182 ಪಿಎಂಸಿ 2021

[ಬಿ.ಸಿ. ನಾಗೇಶ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.